ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ 2013–14ನೇ ಸಾಲಿನ 1ನೇ ತ್ರೈಮಾಸಿಕ ಯೋಜನೆ (ಆಸ್ತಿಗಳ ಸೃಜನೆ) ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :–

ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರ ದಿನಾಂಕ : 24–04–2013ರ ಪತ್ರ ಸಂಖ್ಯೆ : ಹನಿ/ಕೃತೋವಿವಿ/1/2013–14.

ಪ್ರಸ್ತಾವನೆ :–

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2013–14ನೇ ಸಾಲಿನ ಯೋಜನೆ (ಆಸ್ತಿಗಳ ಸೃಜನೆ) ಲೆಕ್ಕಶೀರ್ಷಿಕೆ 2415–80–277–5–01–102 ಅಡಿಯಲ್ಲಿ ರಾಜ್ಯ ಸರ್ಕಾರವು ರೂ. 2900.00 ಲಕ್ಷಗಳನ್ನು ಹಂಚಿಕೆ ಮಾಡಿರುತ್ತದೆ. ಮೇಲೆ ಓದಲಾದ ಹಣಕಾಸು ನಿಯಂತ್ರಣಾಧಿಕಾರಿ, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಇವರ ಪತ್ರದಲ್ಲಿ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ಹೊಸದಾಗಿ ಪ್ರಾರಂಭವಾಗಿದ್ದು, ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರವು ಯೋಜನೆ (ಆಸ್ತಿಗಳ ಸೃಜನೆ) ಉದ್ದೇಶಕ್ಕಾಗಿ ಹಂಚಿಕೆ ಮಾಡಿರುವ ರೂ. 2900.00 ಲಕ್ಷಗಳಲ್ಲಿ ರೂ. 725.00 ಲಕ್ಷಗಳನ್ನು ಪ್ರಥಮ ತ್ರೈಮಾಸಿಕ ಅನುದಾನವಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 10 ಕೃವಿಶಿ 2013**

**ಬೆಂಗಳೂರು, ದಿನಾಂಕ : 04–06–2013.**

ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ರಾಜ್ಯ ಸರ್ಕಾರವು 2013–14ನೇ ಸಾಲಿನಲ್ಲಿ ಯೋಜನೆ (ಆಸ್ತಿಗಳ ಸೃಜನೆ) ಲೆಕ್ಕಶೀರ್ಷಿಕೆ 2415–80–277–5–01–102 ಅಡಿಯಲ್ಲಿ ಹಂಚಿಕೆ ಮಾಡಿರುವ ರೂ. 2900.00 ಲಕ್ಷಗಳಲ್ಲಿ ಸದರಿ ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಪ್ರಥಮ ತ್ರೈಮಾಸಿಕ ಅನುದಾನವಾಗಿ ರೂ. 725.00 ಲಕ್ಷಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :–

1. ದಿನಾಂಕ : 06–08–2012ರ ಆದೇಶದಲ್ಲಿ ವಿಧಿಸಿದ ಷರತ್ತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದ ನಂತರ ಅಥವಾ ಸಕ್ಷಮ ಅಧಿಕಾರಿಗಳ ವರ್ಗಾವಣೆ/ನಿಯೋಜನೆ ಆದ ಕೂಡಲೇ ಅಪೇಕ್ಷಿಸಿದ ಮಾಹಿತಿ/ದಾಖಲೆಯನ್ನು ಸಲ್ಲಿಸತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;

4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;

2) ಈ ಆದೇಶದಡಿ ಬಿಡುಗಡೆಯಾಗುತ್ತಿರುವ ರೂ. 725.00 ಲಕ್ಷಗಳ ಅನುದಾನವನ್ನು ಪಡೆಯಲು ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲುರುಜು ಮಾಡುವ ಅಧಿಕಾರವನ್ನು ತಾತ್ಕಾಲಿಕವಾಗಿ ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3) ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ : 22-05-2013ರ ಟಿಪ್ಪಣಿ ಸಂಖ್ಯೆ : ಕೃಇ 94 ಆಂಆಸ 2013ರಲ್ಲಿ ನೀಡಿರುವ ಅಭಿಪ್ರಾಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ : 10-05-2013ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

9/6

(ಜಿ. ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಇವರಿಗೆ :-

ಸಂಕಲನಕಾರರು,ಕರ್ನಾಟಕ ರಾಜ್ಯಪತ್ರ, ಬೆಂಗಳೂರುರವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

ಪ್ರತಿ:-

1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ನವಿಲೆ-ಶಿವಮೊಗ್ಗ.
3. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
4. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ಜಿಲ್ಲಾ ಖಜಾನೆ, ಶಿವಮೊಗ್ಗ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5), ವಿಧಾನ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.